1125 (1327) ಶ್ರೀ ಓಲೇಕಾರ ನೆಹರು ಚನ್ನಬಸಪ್ಪ (ಬ್ಯಾಡಗಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬ್ಯಾಡಗಿ ಕ್ಷೇತ್ರದ ಮೋಟೆಬೆನ್ನೂರ ಹಾಗೂ ಶಿಡೇನೂರುಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಅವಶ್ಯವಿರುವುದಾಗಿ ಹಾವೇರಿ ಜಿಲ್ಲಾ ಆರೋಗ್ಯಾಧಿಕಾರಿಗಳು ವರದಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಈವರೆವಿಗೂ ಕ್ರಮ ಜರುಗಿಸದಿರಲು ಕಾರಣವೇನು ;

ಇ) ಹಾಗಿದ್ದಲ್ಲಿ, ಎರಡೂ ಗ್ರಾಮಗಳಿಗೆ ಆರೋಗ್ಯ ಕೇಂದ್ರಗಳನ್ನು ಯಾವಾಗ ಮಂಜೂರಾತಿ ನೀಡಲಾಗುವುದು ;

ಈ) ಬ್ಯಾಡಗಿ ಆರೋಗ್ಯ ಕೇಂದ್ರವನ್ನು 100 ಹಾಸಿಗೆಗಳಿಗೆ ಮೇಲ್ದರ್ಜೆಗೆ ಏರಿಸುವುದಾಗಿ ತಿಳಿದು ಬಂದಿದ್ದು ಈ ಬಗ್ಗೆ ಯಾವುದೇ ಕ್ರಮವನ್ನು ಕೈಗೊಳ್ಳದಿರಲು ಕಾರಣವೇನು ?

ಶ್ರೀ ಆರ್. ಅಶೋಕ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಶಿಡೇನೂರ ಗ್ರಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆ ಬಗ್ಗೆ ಪ್ರಸ್ತಾವನೆ ಬಂದಿರುವುದಿಲ್ಲ. ಮೋಟೆಬೆನ್ನೂರಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆಗೆ ಪ್ರಸ್ತಾವನೆ ಬಂದಿರುತ್ತದೆ.

ಆ) ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಇ) ಸರ್ಕಾರದ ಮಾರ್ಗಸೂಚಿಯ ಅನ್ವಯ ಹಾಗೂ ಜನಸಂಖ್ಯೆಯ ಆಧಾರದ ಮೇಲೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮಂಜೂರಾತಿ ನೀಡಲಾಗುತ್ತಿದೆ. ಬ್ಯಾಡಗಿ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ 1 ಲಕ್ಷ 13 ಸಾವಿರ ಇರುತ್ತದೆ. ಮಾರ್ಗಸೂಚಿ ಪ್ರಕಾರ ಇಲ್ಲಿ 4 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅವಶ್ಯಕತೆ ಇದ್ದಲ್ಲಿ ಈಗಾಗಲೇ 4 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. (ಚಿಕ್ಕಬಾಸೂರು, ಕಾಗಿನೆಲೆ, ಶಂಕರಪುರ, ಕದರಮಂಡಲಗಿ) ಆದರೂ ಅವಶ್ಯಕತೆ ಅನುಸರಿಸಿ ಮೋಟೆಬೆನ್ನೂರಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿರಸುವ ಬಗ್ಗೆ ಮಾರ್ಗಸೂಚಿ ಪ್ರಕಾರ ಪರಿಶೀಲಿಸಲಾಗುವುದು.

ಈ) ದಿನಾಂಕ : 25–01–2007 ರಂದು ಸರ್ಕಾರಿ ಆದೇಶದ ಪ್ರಕಾರ ಬ್ಯಾಡಗಿ ಸಾರ್ವಜನಿಕ ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಿದೆ. ಕಟ್ಟಡ ಕಾಮಗಾರಿ ಬಗ್ಗೆ ಕ್ರಮಕೈಗೊಳ್ಳಲಾಗುತ್ತಿದ್ದು, ಮುಗಿದ ನಂತರ ಈಗಾಗಲೇ ಮಂಜೂರಾಗಿರುವ ಹುದ್ದೆಗಳನ್ನು ತುಂಬಲಾಗುವುದು.